RNU AIR DHARWAD

OCTOBER 12, 2025

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳಿಗೆ ಹೆಚ್ಚಿನ ಪ್ರೋತ್ಸಾಹ ಹಾಗೂ ಉತ್ತೇಜನ ನೀಡುವಂತಾಗಲು, ಎಂ.ಎಸ್.ಎಂ.ಇ. ಘಟಕಗಳಿಗೆ ಪ್ರತ್ಯೇಕ ನಿರ್ದೇಶನಾಲಯ ಸ್ಥಾಪಿಸಲಾಗುವುದು ಎಂದು ರಾಜ್ಯದ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ಯಮಗಳ ಖಾತೆ ಸಚಿವ ಶರಣಬಸಪ್ಪ ದರ್ಶನಾಪುರ ಹೇಳಿದರು. ಕಲಬುರಗಿ ನಗರದ ಕೆ.ಕೆ.ಸಿ.ಸಿ.ಐ ಸಭಾಂಗಣದಲ್ಲಿ, ಹುಬ್ಬಳ್ಳಿಯ ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್ ಶಾಖಾ ಕಚೇರಿ ವತಿಯಿಂದ, 'ವಿಶ್ವ ಮಾನದಂಡಗಳ' ದಿನದ ಅಂಗವಾಗಿ ಆಯೋಜಿಸಿದ, ಕಲಬುರಗಿ ಪಾಲುದಾರರ ಸಮಾವೇಶ–**2025** ಹಾಗೂ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮುಂದಿನ ಮೂರು ತಿಂಗಳಲ್ಲಿ ನಿರ್ದೇಶನಾಲಯ ಸ್ಥಾಪನೆ ಕುರಿತು ಅಧಿಕೃತ ಆದೇಶ ಹೊರಬರಲಿದೆ, ಹೊಸ ಕೈಗಾರಿಕೆ ನೀತಿಯಡಿ, ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಕೈಗಾರಿಕೆ ಸ್ಥಾಪನೆಯ, ಆದ್ಯತಾ ವಲಯವೆಂದು ಗುರುತಿಸಲಾಗಿದೆ ಎಂದರು.

<><><>

ಹುಬ್ಬಳ್ಳಿಯ ಕಲ್ಲೂರ್ ಲೇಔಟ್ ನಲ್ಲಿ **HCG** ಕ್ಯಾನ್ಸರ್ ಕೇಂದ್ರದಲ್ಲಿ ನೂತನವಾಗಿ ಆರಂಭಿಸಲಾದ, ಎಲೆಕ್ಟಾ ವರ್ಸಾ ಹಾಗೂ ಸರ್ಫೇಸ್ ಗೈಡೆಡ್ ರೇಡಿಯೇ 'ನ್ ಥೆರಪಿ– ವಿಕಿರಣ ಚಿಕಿತ್ಸಾ ತಂತ್ರಜ್ಞಾನಕ್ಕೆ ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಚಾಲನೆ ನೀಡಿದರು. ಉತ್ತರ ಕರ್ನಾಟಕ ಭಾಗದ ಜನರಿಗೆ ಉತ್ತಮ ಗುಣಮಟ್ಟದ ವೈದ್ಯಕೀಯ ಸೇವೆಗಳನ್ನು ಪೂರೈಸುವ ಉದ್ದೇಶದಿಂದ, ಆರಂಭಗೊಂಡ ನೂತನ ಚಿಕಿತ್ಸಾ ತಂತ್ರಜ್ಞಾನವು ವಿವಿಧ ಶ್ರೇಣಿಯ ಕ್ಯಾನ್ಸರ್‌ಗಳಿಗೆ ವೇಗವಾಗಿ ಮತ್ತು ನಿಖರವಾಗಿ ಚಿಕಿತ್ಸೆ ಒದಗಿಸಲಿದೆ ಎಂದರು.

<><><>

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ, 'ಪ್ರಧಾನ ಮಂತ್ರಿ ಮುದ್ರಾ ಯೋಜನೆ' ಯಡಿ, ವಿಜಯಪುರ ಜಿಲ್ಲೆಯಲ್ಲಿ, ಯೋಜನೆ ಪ್ರಾರಂಭವಾದಾಗಿನಿಂದ, ಇದುವರೆಗೆ, **1** ಲಕ್ಷ **71** ಸಾವಿರದ **642** ಜನ ಫಲಾನುಭವಿಗಳು ಮುದ್ರಾ ಯೋಜನೆಯ ಪ್ರಯೋಜನವನ್ನು ಪಡೆದುಕೊಂಡಿದ್ದಾರೆ ಎಂದು ಜಿಲ್ಲಾ ಲೀಡ್ ಬ್ಯಾಂಕ್ ಪ್ರಬಂಧಕ ಬಿ.ಸಿದ್ದಯ್ಯ ಪುರಾಣಿಕ ತಿಳಿಸಿದ್ದಾರೆ. ಈ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಅವರು ಮಾಹಿತಿ ನೀಡಿದ್ದಾರೆ.

<><><>

ಧ್ವನಿ: ಬಿ.ಸಿದ್ದಯ್ಯ **38** ಸೆಕೆಂದುಗಳು

<><><>

ಮಾಹಿತಿ ಹಕ್ಕು ಕಾಯಿದೆ– ಆರ್.ಟಿ.ಐ ಕಾರ್ಯರೂಪಕ್ಕೆ ಬಂದು, ಇಂದು 20 ವರ್ಷಗಳು ಪೂರ್ಣಗೊಂಡಿವೆ. 2005, ಅಕ್ಟೋಬರ್ 12 ರಂದು ಜಾರಿಗೆ ಬಂದ ಈ ಕಾಯಿದೆಯು, ಸಾರ್ವಜನಿಕ ಹಾಗೂ ಸರ್ಕಾರಿ ಸಂಸ್ಥೆಗಳಲ್ಲಿ ಹೆಚ್ಚಿನ ಪಾರದರ್ಶಕತೆ ತರುವ ಉದ್ದೇಶದಿಂದ ಆರಂಭಗೊಂಡಿತ್ತು.

<><><>

ಕರ್ನಾಟಕ ರಾಜ್ಯ ಸರ್ಕಾರವು, ಸ್ಥಳೀಯ ಆರ್ಥಿಕತೆಯ ವೇಗವರ್ಧನೆಯ ನಿಟ್ಟಿನಲ್ಲಿ ಆರಂಭಿಸಿರುವ ಲೀಪ್ ಯೋಜನೆಗೆ, ಸಾವಿರ ಕೋಟಿ ರೂಪಾಯಿ ಮೀಸಲಿರಿಸಲಾಗಿದೆ, ಇದರಿಂದ 5 ಲಕ್ಷ ಉದ್ಯೋಗ ಸೃಜನೆ ಸಾಧ್ಯವಾಗಲಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ತಮ್ಮ ಎಕ್ಸ್ ಖಾತೆ ಮೂಲಕ ಮಾಹಿತಿ ಹಂಚಿಕೊಂಡಿರುವ ಅವರು, ಈ ಯೋಜನೆಯಡಿ, ಬೆಂಗಳೂರಿನಾಚೆಗಿರುವ ವಿವಿಧ ನಗರಗಳಲ್ಲಿ ಉದ್ಯಮ ಸ್ನೇಹಿ ವಾತಾವರಣ ನಿರ್ಮಿಸಲಾಗುತ್ತಿದೆ. ಹುಬ್ಬಳ್ಳಿ–ಬೆಳಗಾವಿ–ಧಾರವಾಡ, ಕಲಬುರಗಿ–ರಾಯಚೂರು, ಕರಾವಳಿಯ ಮೂರು ನಗರಗಳು ಸೇರಿದಂತೆ ರಾಜ್ಯದ 11 ಪ್ರಮುಖ ನಗರಗಳಲ್ಲಿ ಎಲೆಕ್ಟ್ರಾನಿಕ್ಸ್ ಹಾಗೂ ಐಟಿ–ಬಿಟಿ ಉದ್ಯಮಗಳನ್ನು ಬಲಪಡಿಸಲಾಗುವುದು ಎಂದರು.

<><><>

ಸುದೃಢ ಭಾರತ ನಿರ್ಮಾಣದಲ್ಲಿ ವಿದ್ಯಾರ್ಥಿಗಳ, ಯುವಜನರ ಪಾತ್ರ ಪ್ರಮುಖವಾಗಿದ್ದು, ಮದ್ಯಪಾನ, ಮಾದಕ ವಸ್ತುಗಳ ಸೇವನೆ ಹಾಗೂ ವ್ಯಸನಗಳ ದುಷ್ಪರಿಣಾಮಗಳ ಬಗ್ಗೆ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಮೂಲಕ ನಿರಂತರವಾಗಿ ಅರಿವು ಮೂಡಿಸಲಾಗುವುದು ಎಂದು ಮಂಡಳಿ ಅಧ್ಯಕ್ಷ ಶರಣಪ್ಪ ಸಲಾದಪುರ ಹೇಳಿದರು. ಕಲಬುರಗಿ ತಾಲೂಕು, ಗೋಗಿ ಗ್ರಾಮದ ದರ್ಗಾಕ್ಕೆ ಭೇಟಿ ನೀಡಿ ಧಾರ್ಮಿಕ ಮುಖಂಡರಿಂದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ರಾಜ್ಯದ ಪ್ರತಿ ಹಳ್ಳಿಗಳನ್ನು ವ್ಯಸನ ಮುಕ್ತಗೊಳಿಸುವ ನಿಟ್ಟಿನಲ್ಲಿ ಮಂಡಳಿ ಕಾರ್ಯನಿರ್ವಹಿಸಲಿದೆ ಎಂದರು.

<><><>

ರಾಮನಗರ ಜಿಲ್ಲೆ, ಚನ್ನಪಟ್ಟಣ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ, 'ಸಾಮಾಜಿಕ ಜೀವನದ ಮೇಲೆ ಸೈಬರ್ ಅಪರಾಧಗಳ ಪರಿಣಾಮ ಮತ್ತು ಮುನ್ನೆಚ್ಚರಿಕೆ' ವಿಷಯದ ಕುರಿತಾಗಿ ಜರುಗಿದ ಕಾನೂನು ಕಾರ್ಯಾಗಾರವನ್ನು ರಾಜ್ಯ ಹೈಕೋರ್ಟ್ ನ್ಯಾಯಮೂರ್ತಿ ಇ.ಎಸ್ ಇಂದ್ರೇಶ್ ಉದ್ಘಾಟಿಸಿದರು.

<><><>

ಭಾರತವು ಕೃಷಿ, ಶಿಕ್ಷಣ, ಆರೋಗ್ಯ, ಉದ್ಯೋಗ, ನವೀಕರಿಸಬಹುದಾದ ಇಂಧನ ಹಾಗೂ ಪರಿಸರ ಸಂರಕ್ಷಣೆಯಂತಹ ಕ್ಷೇತ್ರಗಳಲ್ಲಿ ಅಭಿವೃದ್ಧಿಯತ್ತ ಸಾಗಿದೆ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ವಿಕಸಿತ ಭಾರತದ ಸಂಕಲ್ಪ ಸಾಕಾರಗೊಳಿಸಲು ಎಲ್ಲ ನಾಗರಿಕರ ಸಹಕಾರ ಅಗತ್ಯ ಎಂದು ಮೈಸೂರು–ಕೊಡಗು ಕ್ಷೇತ್ರದ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಹೇಳಿದರು. ಮಂಡ್ಯದಲ್ಲಿ ಮಾತನಾಡಿದ ಅವರು, ಗುಣಮಟ್ಟದ ಶಿಕ್ಷಣ, ಆರೋಗ್ಯ, ಸುಸ್ಥಿರ ಅಭಿವೃದ್ಧಿಯತ್ತ ದೇಶ ಹೆಜ್ಜೆಯಿರಿಸಿದೆ ಎಂದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>